ಭಾರತೀಯ ಜನತಾ ಪಾರ್ಟಿ–ಕರ್ನಾಟಕ
Bharatiya Janatha Party-Karnataka
# 48, "ಜಗನ್ನಾಥ ಭವನ", ದೇವಸ್ಥಾನದ ಬೀದಿ, 11ನೇ ಅಡ್ಡರಸ್ತೆ, ಮಲ್ಲೇಶ್ವರ, ಬೆಂಗಳೂರು–560003.
ದೂ.: 080–22041976, 23569999, ಫ್ಯಾಕ್ಸ್: 080–23460398

19–3–2025

ಗೆ,

ಸಂಪಾದಕರು / ವರದಿಗಾರರು.

ಪ್ರಕಟಣೆಯ ಕೃಪೆಗಾಗಿ

*ಮುಖ್ಯಮಂತ್ರಿಗಳೇ ನಿಮ್ಮ ತುಘಲಕ್ ದರ್ಬಾರಿಗೆ ಇತಿಮಿತಿ ಇದೆ...*

# ಮುಸಲ್ಮಾನರಿಗೆ ಮೀಸಲಾತಿ ವಿರುದ್ಧ ಬಿಜೆಪಿಯಿಂದ ತೀವ್ರ ಹೋರಾಟ– ವಿಜಯೇಂದ್ರ

ಬೆಂಗಳೂರು: ರಾಜ್ಯದ ಕಾಂಗ್ರೆಸ್ ಸರಕಾರವು ಮುಸಲ್ಮಾನರಿಗೆ ಮೀಸಲಾತಿ ನೀಡುವ ಮಸೂದೆಯನ್ನು ನಿನ್ನೆ ಸದನದಲ್ಲಿ ಕದ್ದು ಮುಚ್ಚಿ ಮಂಡಿಸಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ. ವಿಜಯೇಂದ್ರ ಅವರು ಆಕ್ಷೇಪಿಸಿದ್ದಾರೆ.

ವಿಧಾನಸೌಧದ ಮುಂಭಾಗದಲ್ಲಿ ಮಾಧ್ಯಮ ಪ್ರತಿನಿಧಿಗಳ ಜೊತೆ ಇಂದು ಮಾತನಾಡಿದ ಅವರು, ವಿಪಕ್ಷದವರ ಕಣ್ತಪ್ಪಿಸಿ ಸದನದಲ್ಲಿ ಮಸೂದೆಯನ್ನು ಮಂಡಿಸಿದ್ದಾರೆ. ಬಿಜೆಪಿಯ ನಿಲುವು ಸ್ಪಷ್ಟವಾಗಿದೆ. ಬಿಜೆಪಿ, ಸಿದ್ದರಾಮಯ್ಯರ ನೇತೃತ್ವದ ಸರಕಾರದ ತುಘಲಕ್ ದರ್ಬಾರನ್ನು ಸ್ಪಷ್ಟವಾಗಿ ವಿರೋಧಿಸುತ್ತದೆ ಎಂದು ಪ್ರಕಟಿಸಿದರು. ಸದನದ ಒಳಗೆ ಮತ್ತು ಹೊರಗಡೆ ಬಿಜೆಪಿ ಇದನ್ನು ವಿರೋಧಿಸುತ್ತದೆ. ಅಗತ್ಯವಿದ್ದಲ್ಲಿ ರಾಜ್ಯ ಹೈಕೋರ್ಟಿನಲ್ಲೂ ಇದನ್ನು ಪ್ರಶ್ನಿಸುತ್ತೇವೆ ಎಂದು ತಿಳಿಸಿದರು.

ಇವರ ದುರಾಡಳಿತಕ್ಕೆ ಇತಿಮಿತಿ ಇದೆ. ಕಾಂಗ್ರೆಸ್ಸಿನವರು ಅಲ್ಪಸಂಖ್ಯಾತರ ಓಲೈಕೆ ರಾಜಕೀಯಕ್ಕೆ ಹೊರಟಿದ್ದಾರೆ. ಸಿದ್ದರಾಮಯ್ಯ, ಸರಕಾರಕ್ಕೆ ನಿಜವಾಗಿ ಅಲ್ಪಸಂಖ್ಯಾತರ ಬಗ್ಗೆ ಕಳಕಳಿ ಇದೆಯೇ ಎಂದು ಕೇಳಿದರು. ಸ್ವಾತಂತ್ರ್ಯ ಬಂದ ಬಳಿಕ ಸುಮಾರು 50-55 ವರ್ಷ ಸುದೀರ್ಘವಾಗಿ ಈ ದೇಶದಲ್ಲಿ, ರಾಜ್ಯದಲ್ಲಿ ಆಡಳಿತ ನಡೆಸಿದ್ದೀರಿ; ಅಲ್ಪಸಂಖ್ಯಾತರಿಗೆ ಶಿಕ್ಷಣಕ್ಕೆ ಒತ್ತು ಕೊಟ್ಟು ಅವರನ್ನು ಮುಂಚೂಣಿಯಲ್ಲಿ ತರುವ ಕೆಲಸವನ್ನು ಕಾಂಗ್ರೆಸ್ಸಿನವರು ಯಾಕೆ ಮಾಡಿಲ್ಲ ಎಂದು ಕೇಳಿದರು.

ಅಲ್ಪಸಂಖ್ಯಾತರಿಗೆ ಉತ್ತಮ ಶಿಕ್ಷಣ ನೀಡಿ ಅವರನ್ನು ಮುಂದಕ್ಕೆ ತರುವ ಇಚ್ಛಾಶಕ್ತಿ ಕಾಂಗ್ರೆಸ್ಸಿನವರಿಗೆ ಇರಲಿಲ್ಲ ಎಂದು ಟೀಕಿಸಿದರು. ಬಿಜೆಪಿ ಅಲ್ಪಸಂಖ್ಯಾತರ ವಿರೋಧಿ ಎಂದು ಸಿದ್ದರಾಮಯ್ಯನವರು ಬಿಂಬಿಸಲು ಹೊರಟಿದ್ದಾರೆ. ಬಿಜೆಪಿ ಮುಸಲ್ಮಾನರ ವಿರೋಧಿಗಳಲ್ಲ. ಇಡೀ ದೇಶದಲ್ಲಿ ಅಲ್ಪಸಂಖ್ಯಾತ ಮಹಿಳೆಯರಿಗೆ ನ್ಯಾಯ ನೀಡಲು ತ್ರಿವಳಿ ತಲಾಖ್ ಅನ್ನು ಕಿತ್ತು ಹಾಕಿದ್ದು, ಬಿಜೆಪಿಯ ನರೇಂದ್ರ ಮೋದಿಜೀ ಅವರ ಸರಕಾರ ಎಂದು ವಿವರಿಸಿದರು.

ಕೇಂದ್ರ ಸರಕಾರದ ನರೇಂದ್ರ ಮೋದಿಜೀ ಅವರ ಸರಕಾರ ನೀಡಿದ ಕಾರ್ಯಕ್ರಮಗಳು, ಜನ್‌ಧನ್ ಖಾತೆ, ಉಜ್ವಲ ಸೇರಿ ಅನೇಕ ಯೋಜನೆಗಳನ್ನು ಕೊಟ್ಟಿದ್ದು, ಅವನ್ನು ಕೇವಲ ಹಿಂದೂಗಳಿಗೆ ಕೊಟ್ಟಿಲ್ಲ. ಯಡಿಯೂರಪ್ಪ ಅವರ ಭಾಗ್ಯಲಕ್ಷ್ಮೀ ಯೋಜನೆ ಕೇವಲ ಹಿಂದೂಗಳಿಗೆ ಕೊಟ್ಟಿಲ್ಲ ಎಂದು ಗಮನ ಸೆಳೆದರು.

ಈ ದೇಶದ ಪ್ರತಿಯೊಬ್ಬರಿಗೂ ಕೇಂದ್ರದ ಮೋದಿಜೀ ಅವರ ಸರಕಾರ ಕಾರ್ಯಕ್ರಮಗಳನ್ನು ನೀಡಿದೆ. ಬಿಜೆಪಿ, ಕಾಂಗ್ರೆಸ್ಸಿನವರ ಮಾದರಿಯಲ್ಲಿ ಮುಸಲ್ಮಾನರನ್ನು ಮತಬ್ಯಾಂಕಿಗೆ ಸೀಮಿತ ಮಾಡಿಲ್ಲ; ಮುಖ್ಯಮಂತ್ರಿಗಳೇ ನಿಮ್ಮ ತುಘಲಕ್ ದರ್ಬಾರಿಗೆ ಇತಿಮಿತಿ ಇದೆ. ಮುಸಲ್ಮಾನರಿಗೆ ಸರಕಾರಿ ಕಾಮಗಾರಿಗಳಲ್ಲಿ ಶೇ 4 ಮೀಸಲಾತಿಯನ್ನು ನಾವು ಸ್ಪಷ್ಟವಾಗಿ ವಿರೋಧ ಮಾಡುತ್ತೇವೆ ಎಂದು ಎಚ್ಚರಿಸಿದರು.

ಸದನದ ಒಳಗೆ ಮತ್ತು ಹೊರಗಡೆ ಹೋರಾಟದ ರೂಪುರೇಷೆ ಸಂಬಂಧ ಮುಖಂಡರು ಕುಳಿತು ಚರ್ಚೆ ಮಾಡುತ್ತೇವೆ. ಬಳಿಕ ತೀರ್ಮಾನ ಮಾಡುತ್ತೇವೆ ಎಂದು ಅವರು ಪ್ರಶ್ನೆಗೆ ಉತ್ತರ ಕೊಟ್ಟರು.

(ಕರುಣಾಕರ ಖಾಸಲೆ)

ಮಾಧ್ಯಮ ಸಂಚಾಲಕರು

ಬಿಜೆಪಿ ಕರ್ನಾಟಕ

# 48, "JAGANNATHA BHAVAN", Temple Street, 11th Cross, Malleshwara, Bengaluru-560003.
Phone: 080-22041976, 23569999, Fax: 080-23460398
e-mail: bjponline@gmail.com, web: www.bjpkarnataka.org